ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 306
ಸದಸ್ಯರ ಹೆಸರು : ಶ್ರೀ ಬಿ.ಕೆ. ಹರಿಪ್ರಸಾದ್
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 09-12-2020
ಉತ್ತರಿಸುವ ಸಚಿವರು : ಕಂದಾಯ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಎಲ್ಲಾ ಭಾಗದಲ್ಲೂ ಕೃಷಿ ಭೂಮಿಯನ್ನು ವಾಸದ ಬಡಾವಣೆಯಾಗಿ ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕಾಗಿ ಭೂ ಪರಿವರ್ತನೆ ಮಾಡಲು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 95(2) ರಡಿ ಅವಕಾಶ ಕಲ್ಪಿಸಲಾಗಿದೆ. ಸದರಿ ಅವಕಾಶದಂತೆ ಭೂ ಪರಿವರ್ತನೆ ವಿಧಾನವನ್ನು ಸರಳೀಕರಣಗೊಳಿಸಿ ಅನುಷ್ಠಾನಗೊಳಿಸಲು ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 156 ಎಲ್‌ಜಿಪಿ 2020; ದಿನಾಂಕ: 21.09.2020 ರಂದು ಆದೇಶ ಹೊರಡಿಸಲಾಗಿದೆ. ಮುಂದುವರೆದು, ಬೆಂಗಳೂರು ನಗರ ಮತ್ತು ಅದರ ಸುತ್ತ ಮುತ್ತ ನಿರ್ಮಾಣವಾಗುತ್ತಿರುವ ಅನಧಿಕೃತ ಬಡಾವಣೆಗಳನ್ನು ತಡೆಯುವ ಸಲುವಾಗಿ ಸರ್ಕಾರದ ಆದೇಶ ಸಂಖ್ಯೆ: ನಅಇ/248/ಬೆಂಅಪ್ರಾ/2016; ದಿನಾಂಕ: 13.07.2016 ರಲ್ಲಿ ಮಾರ್ಗಸೂಚಿಗಳನ್ನು ರೂಪಿಸಿ ಸರ್ಕಾರಕ್ಕೆ ವರದಿ ಸಲ್ಲಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ 15 ಸದಸ್ಯರುಗಳನ್ನು ಒಳಗೊಂಡಂತೆ ಸಮಿತಿಯನ್ನು ರಚಿಸಲಾಗಿರುತ್ತದೆ.
ಆ)	ಕೃಷಿ ಭೂಮಿಯನ್ನು ಭೂ ಪರಿವರ್ತನೆಗೊಳಿಸದೇ ಬಡಾವಣೆ ನಿರ್ಮಿಸಿ, ಆ ಜಾಗದಲ್ಲಿ ಕಟ್ಟಡದ ನಿರ್ಮಾಣ ಮಾಡಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಬರಬೇಕಾದ ಆದಾಯವನ್ನು ವಸೂಲಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ರ ಕಲಂ 95(1) ಹಾಗೂ 95(2) ರನ್ವಯ ಕೃಷಿ ಜಮೀನನ್ನು ಭೂ ಪರಿವರ್ತನೆ ಮಾಡದೆ ಬಳಸಿಕೊಂಡು ತದನಂತರ ಭೂ ಪರಿವರ್ತನೆ ಮಾಡಲು ಅರ್ಜಿ ಸಲ್ಲಿಸಿಕೊಂಡಲ್ಲಿ ಸದರಿ ಜಮೀನಿನಲ್ಲಿರುವ ಅನಧಿಕೃತ ಕಟ್ಟಡಕ್ಕೆ ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ರ ಕಲಂ 96 ರನ್ವಯ ದಂಡ ಶುಲ್ಕ ವಿಧಿಸಲು ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ಆರ್‌ಡಿ 168 ಎಲ್‌ಜಿಕ್ಯೂ 2020 (ಇ)

(ಆರ್.ಅಶೋಕ)
ಕಂದಾಯ ಸಚಿವರು